**ಓ.ಎಸ್. ನಂಃ 402/2021**

**ಪಿ.ಡಬ್ಲ್ಯೂಃ 1**

**ದಿನಾಂಕ 23-08-2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ವಾದಿಯ ಪರ: ಶ್ರೀ.ಜಿ.ಜಿ. ವಕೀಲರಿಂದಃ**

ನಾನು ಈಗಾಗಲೇ ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ನಂತರದಲ್ಲಿ ನಾನು ವಾದ ಪತ್ರವನ್ನು ತಿದ್ದುಪಡಿ ಮಾಡಿರುವದರಿಂದ ಹಾಗೂ ನ್ಯಾಯಾಲಯವು ಹೆಚ್ಚುವರಿ ವಿವಾದಾಂಶವನ್ನು ಮಾಡಿರುವುದರಿಂದ ನನ್ನ ಹಿಂದಿನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರಕ್ಕೆ ಪೂರಕವಾಗುವಂತೆ ಈ ದಿನ ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ರೂಪದಲ್ಲಿ ಸಲ್ಲಿಸುತ್ತಿದ್ದು ಅದನ್ನು ನನ್ನ ಮಾಹಿತಿ ಮೇರೆಗೆ ವಕೀಲರು ತಯಾರಿಸಿರುತ್ತಾರೆ. ಅದರಲ್ಲಿ ಬರೆದಿರುವ ಸಂಗತಿಗಳು ನಿಜ ಇರುತ್ತವೆ ಮತ್ತು ಅದರಲ್ಲಿರುವ ಸಹಿ ನನ್ನದಾಗಿರುತ್ತದೆ.

ದಿನಾಂಕ 14.11.1958 ರ ನೊಂದಾಯಿತ ಕ್ರಯ ಪತ್ರದ ದೃಢಿಕೃತ ನಕಲನ್ನು ನಿಪಿ.22 ಎಂದು ಗುರುತಿಸಲಾಯಿತು

**ವಾದಿ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗಾಗಿ ಕಾಲಾವಕಾಶ ಕೋರಿದ್ದು, ಕಾಲಾವಕಾಶ ನೀಡಲಾಯಿತು.**

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

**ಓ. ಹೇ. ಕೇ. ಸರಿ ಇದೆ.**

**ಹೆಚ್ಚುವರಿ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶರು**

**ಕೆ.ಆರ್.ನಗರ**